ಯೋಜನೆಗಳನ್ನು ಹಮ್ಮಿಕೊಂಡಿರುವುದಿಲ್ಲ. ಆದಾಗ್ಯೂ ರೈತರ ಬೇಡಿಕೆ ಬಂದಾಗ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಲು ತಾಂತ್ರಿಕ ಸಲಹೆ, ಹಾಗೂ ಶೇಕಡ 50ರ ರಿಯಾಯಿತಿ ದರದಲ್ಲಿ ಸಸ್ಯ ಸಂರಕ್ಷಣಾ ಔಷಧಿ ಒದಗಿಸಲಾಗುತ್ತದೆ. ಈ ಬಗ್ಗೆ ಹೆಚ್ಚಿನ ವಿಷಯ ಸಾಂಬಾರು ಮಂಡಳಿಯಿಂದ ಪಡೆಯಬಹುದಾಗಿರುತ್ತದೆ.

ಆ) ಈ ವಿಷಯವು ತೋಟಗಾರಿಕೆ ಇಲಾಖೆಗೆ ಸಂಬಂಧಿಸಿರುವುದಿಲ್ಲ.

ಇ) ಈ ವಿಷಯವು ಅರಣ್ಯ ಇಲಾಖೆ ವ್ಯಾಪ್ತಿಗೆ ಬರುತ್ತದೆ.

ವಿಷಯ: ಆಶ್ರಯ ಯೋಜನೆಯಡಿಯಲ್ಲಿ ಸ್ವಂತ ಮನೆ ನಿರ್ಮಾಣ.

2649 (3628)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ನಿವೇಶನ ನೀಡಿ ಆಶ್ರಯ ಯೋಜನೆಯಡಿಯಲ್ಲಿ ಸ್ವಂತ ಮನೆ ಕಟ್ಟುವ ಕೆಲಸ ಎಷ್ಟು ಕ್ಷೇತ್ರಗಳಲ್ಲಿ ಪ್ರಾರಂಭವಾಗಿದೆ?

ಶ್ರೀ ಹೆಚ್.ಡಿ.ರೇವಣ್ಣ (ವಸತಿ ಸಚಿವರು):

ಅ) ಸರ್ಕಾರಿ ಆದೇಶ ಸಂಖ್ಯೆ:ಹೆಚ್ಯುಡಿ 1 ಹೆಚ್ಎಹೆಚ್ 95 (2) ದಿನಾಂಕ 18-8-95ರ ಪ್ರಕಾರ ಫಲಾನುಭವಿಗಳೇ ಮನೆಗಳನ್ನು ಸ್ವಂತ ನಿರ್ಮಿಸಬೇಕಾಗುತ್ತದೆ.

ಈ ನೀತಿಯ ಪ್ರಕಾರ ಎಲ್ಲಾ ಜಿಲ್ಲೆಗಳಲ್ಲಿ 95-96, 96-97 ಮತ್ತು 97-98ನೇ ಸಾಲಿನಲ್ಲಿ ಫಲಾನುಭವಿಗಳೇ ಸ್ವಂತ ಮನೆ ಕಟ್ಟುವ ಕೆಲಸ ಎಲ್ಲಾ ಕಡೆ ನಡೆಯುತ್ತಿದೆ. (ಫಲಾನುಭವಿಗಳು ಮನೆ ಕಟ್ಟದೆ ಕಂಟ್ರಾಕ್ಟರುಗಳು ಮನೆ ಕಟ್ಟುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ)

ವಿಷಯ: ನರಸಿಂಹರಾಜ ಕ್ಷೇತ್ರ ವ್ಯಾಪ್ತಿ ನಗರಪಾಲಿಕೆಯ ಆಶ್ರಯ ಯೋಜನೆ ಮನೆಗಳ ವಿತರಣೆಯಲ್ಲಿ ಅವ್ಯವಹಾರ

2650 (3204)

ಶ್ರೀ ಇ.ಮಾರುತಿ ರಾವ್ ಪವಾರ್ (ನರಸಿಂಹರಾಜ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರ ನರಸಿಂಹರಾಜ ಕ್ಷೇತ್ರ ವ್ಯಾಪ್ತಿಯಲ್ಲಿ ನಗರಪಾಲಿಕೆ ಆಶ್ರಯ

ಯೋಜನೆಯಡಿ ಎಷ್ಟು ಮನೆ ವಿತರಣೆಗೆ ಪೂರ್ಣಗೊಂಡಿವೆ; ಈ ಮನೆಗಳ ಹಂಚಿಕೆಯಲ್ಲಿ ಅರ್ಜಿದಾರರಿಗೆ ಅನ್ಯಾಯವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದಯೇ?

ಆ) ಹಾಗಿದ್ದಲ್ಲಿ ಪೂರ್ಣಗೊಂಡಿರುವ ಮನೆಗಳೆಷ್ಟು? ಉಳಿಕೆ ಎಷ್ಟು?

ಇ) ವಿತರಣೆಯಲ್ಲಿ ಆಗಿರುವ ಅನ್ಯಾಯದ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಹೆಚ್.ಡಿ.ರೇವಣ್ಣ (ವಸತಿ ಸಚಿವರು):

ಅ) 500 ಮನೆಗಳು ಪೂರ್ಣಗೊಂಡಿದ್ದು, ವಿತರಣೆಯಾಗಿದೆ.

ಈ ಮನೆಗಳ ಹಂಚಿಕೆಯಲ್ಲಿ ಅರ್ಜಿದಾರರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪೂರ್ಣಗೊಂಡ ಮನೆಗಳು 500. ಪೂರ್ಣಗೊಳ್ಳುವ ಹಂತದಲ್ಲಿರುವ ಮನೆಗಳು 500.

ಇ) ಅರ್ಹರಲ್ಲದವರು ಆಯ್ಕೆಗೊಂಡ 9 ಪ್ರಕರಣಗಳಲ್ಲಿ ಪುನರ್ ಪರಿಶೀಲಿಸಿ ರದ್ದು ಪಡಿಸುವ ಕ್ರಮ ತೆಗೆದುಕೊಳ್ಳಲಾಗಿದೆ. ಹಾಗೂ ಅರ್ಹರಾದವರಿಗೆ ಮಂಜೂರು ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ: ಮಾರುಕಟ್ಟೆ ಸಮಿತಿಗಳಲ್ಲಿ ಗುತ್ತಿಗೆ ಆಧಾರ

2651 (4014)

ಶ್ರೀ ಡಿ.ಆರ್.ಪಾಟೀಲ್ (ಗದಗ್): ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷಿ ಮಾರಾಟ ಇಲಾಖೆಯ ಕೃಷಿ ಹುಟ್ಟುವಳಿ ಮಾರುಕಟ್ಟೆ ಸಮಿತಿಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ಸಂಖ್ಯೆ ಎಷ್ಟು?

ಆ) ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿದ್ದ ಎಪಿಎಂಸಿ ಸಿಬ್ಬಂದಿಯ ಸೇವೆ ಸಕ್ರಮಗೊಂಡಿದ್ದರೂ ಸಹ ಗುತ್ತಿಗೆ ಆಧಾರದ ಮೇಲೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿ ಸೇವೆ ಸಕ್ರಮಗೊಳ್ಳದಿರಲು ಕಾರಣಗಳೇನು?

ಇ) ಸಾಂದರ್ಭಿಕ ಹಾಗೂ ಗುತ್ತಿಗೆ ಆಧಾರದ ಮೇಲೆ ದೀರ್ಘಕಾಲದಿಂದ